ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಒತ್ತುವರಿಯಾಗಿರುವ ಅರಣ್ಯ ಪ್ರದೇಶ ತೆರವು ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):-

1411 (1686) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಒತ್ತುವರಿಯಾಗಿರುವ ಒಟ್ಟು ಅರಣ್ಯ ಪ್ರದೇಶದ ಅಂದಾಜು ಸರ್ಕಾರಕ್ಕಿದೆಯೇ ; ಹಾಗಿದ್ದಲ್ಲಿ, ಪ್ರದೇಶವಾರು ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಆ) ಒತ್ತುವರಿಯಾಗಿರುವ ಅರಣ್ಯ ಪ್ರದೇಶವನ್ನು ತೆರವುಗೊಳಿಸಿ ಮತ್ತೆ ಇಲಾಖೆಯ ವಶಕ್ಕೆ ಸುಪರ್ದಿಗೆ ತೆಗೆದುಕೊಳ್ಳುವಲ್ಲಿ ಸರ್ಕಾರ ಯಾವ ಕ್ರಮಗಳನ್ನು ಅನುಸರಿಸುತ್ತದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ವೈಯಕ್ತಿಕ ಹಿತಾಸಕ್ತಿಯಿಂದಾಗಿ ಅರಣ್ಯ ಪ್ರದೇಶವನ್ನು ಒತ್ತುವರಿ ಮಾಡಿ ಸರ್ಕಾರಕ್ಕೆ ವಂಚಿಸಿರುವ ವ್ಯಕ್ತಿಗಳ/ಸಂಸ್ಥೆಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; ಹಾಗಿದ್ದಲ್ಲಿ, ಅಂತಹ ವ್ಯಕ್ತಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು;

(ಈ) ಒತ್ತುವರಿ ತೆರವು ನಂತರದಲ್ಲಿ ವಶಪಡಿಸಿಕೊಳ್ಳಲಾದ ಅರಣ್ಯ ಪ್ರದೇಶವನ್ನು ಅಭಿವೃದ್ಧಿಗೊಳಿಸುವ ನಿಟ್ಟಿನಲ್ಲಿ ಸರ್ಕಾರದ ಮುಂದಿನ ಕ್ರಮಗಳೇನು ? (ಮಾಹಿತಿ ಒದಗಿಸುವುದು)